# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2556 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಂ ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 24-03-2022 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಆಗಿರುವ ಅನಧಿಕೃತ ಅಭಿವೃದ್ಧಿ ಅಥವಾ ನಿರ್ಮಾಣಗಳನ್ನು ಸಕ್ರಮಗೊಳಿಸುವಿಕೆಗೆ ತಿದ್ದುಪಡಿ ಕಾಯ್ದೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಕ್ರಮಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಾಜ್ಯ ಸರ್ಕಾರದ ಅಕ್ರಮ ಸಕ್ರಮದಡಿಯಲ್ಲಿ ಕಾನೂನು ಉಲ್ಲಂಘನೆ ಮಾಡಿ, ಕಟ್ಟಡ ನಿರ್ಮಿಸಿರುವ ನಗರದ ನಾಗರೀಕರಿಗೆ ಅನುಕೂಲ ಮಾಡುವ ದೃಷ್ಠಿಯಿಂದ ವಿವಿಧ ಅಳತೆಯ ವಿವಿಧ ನಿವೇಶನಗಳಿಗೆ ದಂಡ ವಸೂಲಾತಿ ಮೂಲಕ, ಉಲ್ಲಂಘನೆ ಮಾಡಿ ಕಟ್ಟಡ ನಿರ್ಮಿಸುತ್ತಿರುವ ಕಟ್ಟಡಗಳನ್ನು ಸಕ್ರಮಗೊಳಿಸುವ ಉದ್ದೇಶದಿಂದ ಅಕ್ರಮ ಸಕ್ರಮ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಸಂಬಂಧವಾಗಿ ಘನ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ 8895/2016 ರಂತೆ ಏಕ ಸದಸ್ಯ ಪೀಠವು ನೀಡಿದ್ದ ತಡೆಯಾಜ್ಞೆಯನ್ನು ದ್ವಿಸದಸ್ಯ ಪೀಠವು ತೆರವುಗೊಳಿಸಿ, ಸದರಿ ಯೋಜನೆಗೆ ಹಸಿರು ನಿಶಾನೆ ತೋರಿಸಿದಂತೆ ಯೋಜನೆ ಜಾರಿಗೊಳಿಸಲು ಬಿಬಿಎಂಪಿ ಯಿಂದ ಕ್ರಮ ಕೈಗೊಳ್ಳಲಾಗುತ್ತಿತ್ತು. ಈ ಹಂತದಲ್ಲಿ ಸಕ್ರಮ ಯೋಜನೆಗೆ ಘನ ಸರ್ವೋಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ. ಅನಧಿಕೃತ ನಿರ್ಮಾಣ / ಉಲ್ಲಂಘನೆಗಳನ್ನು ಸಕ್ರಮಗೊಳಿಸಲು ಅವಕಾಶ ಕಲ್ಪಿಸಲಾದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ -1961 ರ ಕಲಂ 76 (ಎಫ್ಎಫ್) ಮತ್ತು ಕೆ.ಎಂ.ಸಿ ಕಾಯ್ದೆ - 1976 ಸೆಕ್ಷನ್ 321 (ಬಿ)ರ ಸಿಂಧುತ್ವದ ಬಗ್ಗೆ ಸಿಟಿಜನ್ ಆಕ್ಷನ್ ಫೋರಂ ರವರು ರಾಜ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದ ವಿರುದ್ಧ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ: 11077-78/2017 ರಲ್ಲಿ ಪ್ರಕರಣ ದಾಖಲಿಸಿದ್ದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಕ್ರಮ ಯೋಜನೆಗೆ ತಡೆಯಾಜ್ಞೆ ನೀಡಿದ್ದು, ವಿಚಾರಣೆ ಹಂತದಲ್ಲಿರುತ್ತದೆ. |

...2.

| | | |
|---|---|---|
| ಆ) | ಇಂತಹ ಅನಧಿಕೃತ ಅಭಿವೃದ್ಧಿ ಅಥವಾ ನಿರ್ಮಾಣಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೋಟಿಸ್ ನೀಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಘನ ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿರುವ ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 41517/2019ರಲ್ಲಿನ ಆದೇಶಗಳಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಿರುವ ಖಾಸಗಿ ಕಟ್ಟಡಗಳ ಸರ್ವೆ ಕಾರ್ಯವನ್ನು ನಡೆಸುತ್ತಿದ್ದು, ಅದರಂತೆ ಅನಧಿಕೃತ ನಿರ್ಮಾಣ ಮಾಡಿರುವ ಕಟ್ಟಡಗಳ ಮಾಲೀಕರುಗಳಿಗೆ ಬಿಬಿಎಂಪಿ ಕಾಯ್ದೆ – 2020 ಸೆಕ್ಷನ್ 313, 248 (1), (2), (3) ಮತ್ತು 356 ರನ್ವಯ ನೋಟಿಸ್ ನೀಡಲಾಗುತ್ತಿರುತ್ತದೆ. |
| ಇ) | ಇಂತಹ ಅನಧಿಕೃತ ಅಭಿವೃದ್ಧಿ ಅಥವಾ ನಿರ್ಮಾಣಗಳನ್ನು ಸಕ್ರಮಗೊಳಿಸಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಈ ಕುರಿತು ಅಕ್ರಮ-ಸಕ್ರಮ ಯೋಜನೆಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ಇದ್ದು, ಘನ ಸರ್ವೋಚ್ಚ ನ್ಯಾಯಾಲಯದ ಆದೇಶಕ್ಕೆ ಒಳಪಟ್ಟು ಅದರಂತೆ ಪರಿಶೀಲಿಸಿ, ನಿಯಮಾನುಸಾರ ಕ್ರಮವಹಿಸಲಾಗುವುದು. |

**ನಅಇ 143 ಎಂಎನ್‌ಯು 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ